**ಪ್ರಕಟಣೆ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ನಗರ ಪಾಲಿಕೆ ಕಛೇರಿಗಳು, ನರಸಿಂಹರಾಜ ಚೌಕ, ಬೆಂಗಳೂರು-560002**

## ಅಧಿಸೂಚನೆ

**ಅಧಿಸೂಚನೆ ಸಂಖ್ಯೆ:ಬಿ12(3)ಪಿಆರ್/75-ಎ/2008-09, ದಿನಾಂಕ:09-03-2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯ ಇಲಾಖೆಯಲ್ಲಿ ಈ ಕೆಳಗೆ ನಮೂದಿಸಿರುವ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿಯಿಂದ ಖಾಯಂ ಆಗಿ ಭರ್ತಿ ಮಾಡುವ ಬಗ್ಗೆ ಈ ಕೆಳಗೆ ನಮೂದಿಸಿರುವ ಷರತ್ತುಗಳು ಒಳಗೊಂಡಂತೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸಹಾಯಕ ಆಯುಕ್ತರು(ನೇಮಕಾತಿ ಮತ್ತು ವಿಚಾರಣೆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರವರ ಕಛೇರಿ, 3ನೇ ಮಹಡಿ, ಅನೆಕ್ಸ್ ಬಿಲ್ಡಿಂಗ್, ಎನ್.ಆರ್.ಚೌಕ, ಬೆಂಗಳೂರು-2, **ದಿನಾಂಕ:15-04-2011** ರಂದು ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ **ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸುವುದು**. ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ನಗರಪಾಲಿಕೆಯ ಆಯುಕ್ತರವರಿಗೆ ಅಧಿಕಾರವಿರುತ್ತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

| ಕ್ರ.ಸ | ಹುದ್ದೆಯ ಹೆಸರು | ವಿದ್ಯಾರ್ಹತೆ | ಹುದ್ದೆಗಳ ಸಂಖ್ಯೆ | ವರ್ಗೀಕರಣ | | | | | | | | | ವೇತನ ಶ್ರೇಣಿ |
|---|---|---|---|---|---|---|---|---|---|---|---|---|---|
| | | | | | ಪ.ಜಾ | ಪ.ಪಂ | ಸಾ.ಅ | ಪ್ರ-1 | ಪ್ರ 2ಎ | ಪ್ರ 2ಬಿ | ಪ್ರ 3ಎ | ಪ್ರ 3ಬಿ | |
| 01 | ಎ.ಎನ್.ಎಂ | ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಲ್ಲಿ Auxillary Nurse/ Midwife ತರಬೇತಿ ಅಥವಾ Midwifery ತರಬೇತಿ ಯನ್ನು ಪಡೆದಿರಬೇಕು | 63 | ಇತರೆ | 02 | 01 | 06 | 01 | 02 | 01 | 01 | 01 | 6250-12000 |
| | | | | ಮಹಿಳೆ | 03 | -- | 09 | 01 | 03 | 01 | 01 | 01 | |
| | | | | ಗ್ರಾಮೀಣ | 03 | -- | 09 | 01 | 03 | 01 | -- | 01 | |
| | | | | ಮಾ.ಸೈ | 01 | -- | 03 | -- | 01 | -- | -- | -- | |
| | | | | ಕ.ಮಾ.ಅ | -- | -- | 01 | -- | -- | -- | -- | -- | |
| | | | | ಯೋ.ನಿರಾ | -- | -- | 01 | -- | -- | -- | -- | -- | |
| | | | | ಅಂ.ವಿ. | 01 | -- | 02 | -- | 01 | -- | -- | -- | |
| | | | | **ಒಟ್ಟು** | **10** | **01** | **31** | **03** | **10** | **03** | **02** | **03** | |
| 04 | ಸಬ್ ರಿಜಿಸ್ಟ್ರಾರ್ | ಎಸ್.ಎಸ್.ಎಲ್.ಸಿ. ಯಲ್ಲಿ ಉತ್ತೀರ್ಣರಾಗಿರಬೇಕು | 26 | ಇತರೆ | 01 | 01 | 03 | 01 | 01 | 01 | 01 | 01 | 5800-10500 |
| | | | | ಮಹಿಳೆ | 01 | -- | 04 | -- | 01 | -- | -- | -- | |
| | | | | ಗ್ರಾಮೀಣ | 01 | -- | 04 | -- | 01 | -- | -- | -- | |
| | | | | ಮಾ.ಸೈ | -- | -- | 01 | -- | -- | -- | -- | -- | |
| | | | | ಕ.ಮಾ.ಅ | -- | -- | -- | -- | -- | -- | -- | -- | |
| | | | | ಯೋ.ನಿರಾ | -- | -- | -- | -- | -- | -- | -- | -- | |
| | | | | ಅಂ.ವಿ. | 01 | -- | 01 | -- | 01 | -- | -- | -- | |
| | | | | **ಒಟ್ಟು** | **04** | **01** | **13** | **01** | **04** | **01** | **01** | **01** | |

1. ಅಂ.ವಿ-ಅಂಗವಿಕಲರು 2. ಮಾ.ಸೈ-ಮಾಜಿ ಸೈನಿಕರು 3. ಕ.ಮಾ.ಅ-ಕನ್ನಡ ಮಾಧ್ಯಮ ಅಭ್ಯರ್ಥಿ
4. ಯೋ.ನಿರಾ-ಯೋಜನಾ ನಿರಾಶ್ರಿತರು

# <u>ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:-</u>

1. **ಅರ್ಜಿಗಳನ್ನು ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು. ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.**
2. **ಅರ್ಹತಾ ಪ್ರಮಾಣ:**
   ಜಾಹೀರಾತಿನಲ್ಲಿ ಆಯಾ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಮಾತ್ರ ಪರಿಗಣಿಸುವುದಿದ್ದು, ಉನ್ನತ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.
3. **ಆಯ್ಕೆ ವಿಧಾನ:**
   - ಅ) ನಿರ್ದಿಷ್ಟಪಡಿಸಿರುವ ವಿದ್ಯಾರ್ಹತೆಯ aggregate percentage ಆಧಾರದ ಮೇಲೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
   - ಆ) ಅರ್ಹತೆ ಮತ್ತು ಮೀಸಲಾತಿಯನುಸಾರ 1:2 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಮೂಲ ದಾಖಲಾತಿಗಳ ಪರಿಶೀಲನೆಗೆ ಆಹ್ವಾನಿಸಲಾಗುವುದು.
   - ಇ) ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ಬಾಧಿತರಾದ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗುವುದು.
   - ಈ) ಆಕ್ಷೇಪಣೆಗಳನ್ನನುಸರಿಸಿ ಪರಿಷ್ಕೃತ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಚುರಪಡಿಸ ಲಾಗುವುದು/ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಚುರಪಡಿಸಲಾಗುವುದು.

4. **ವಯೋಮಿತಿ:**
   ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಕನಿಷ್ಠ 18 ವರ್ಷಗಳು ತುಂಬಿರಬೇಕು, ಹಾಗೂ ಈ ಕೆಳಗೆ ನಮೂದಿಸಿರುವ ವಯೋಮಿತಿಯನ್ನು ಮೀರಿರಬಾರದು.

   **ಸಾಮಾನ್ಯ ವರ್ಗ : 35 ವರ್ಷಗಳು**
   **ವರ್ಗ-2ಎ/2ಬಿ/3ಎ/3ಬಿ : 38 ವರ್ಷಗಳು**
   **ಪ.ಜಾತಿ/ಪ.ಪಂ/ವರ್ಗ-1 : 40 ವರ್ಷಗಳು**

   ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಆಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಆಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ಇ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

ಈ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

5. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.

6. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು ಪಾಲಿಕೆಯ ವೆಬ್‌ಸೈಟ್ **www.bbmp.gov.in** **ಯಿಂದ Download ಮಾಡಿಕೊಳ್ಳುವುದು**. **ಅರ್ಜಿಗಳನ್ನು ಪಾಲಿಕೆಯಿಂದ ಒದಗಿಸಲಾಗುವುದಿಲ್ಲ**. ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರು ನಮೂದಿಸಿರಬೇಕು.
7. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
8. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ನೇಮಕಾತಿ ಪ್ರಾಧಿಕಾರ / ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.
9. ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವೊಂದನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
10. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
11. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
12. ಒಂದಕ್ಕಿಂತ ಹೆಚ್ಚು ಹುದ್ದೆಗೆ ಅರ್ಜಿಯನ್ನು ಸಲ್ಲಿಸಬಯಸುವ ಅಭ್ಯರ್ಥಿಗಳು ಪ್ರತ್ಯೇಕ ಹುದ್ದೆಗೆ ಪ್ರತ್ಯೇಕ ಅರ್ಜಿಯನ್ನು ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು.
13. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಮತ್ತು ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
14. ಮೇಲಿನ ಹುದ್ದೆಗಳಿಗೆ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರು ಕಾಯ್ದಿರಿಸಿಕೊಂಡಿರುತ್ತಾರೆ.
15. ಪ.ಜಾತಿ/ಪ.ಪಂಗಡ ಮತ್ತು ಪ್ರವರ್ಗ-1 ಅಭ್ಯರ್ಥಿಗಳು ರೂ. 50/- ಹಾಗೂ ಇತರರಿಗೆ ರೂ. 100/- ಗಳಿಗೆ **ಬ್ಯಾಂಕ್ ಡಿ.ಡಿ.ಯನ್ನು ಆಯುಕ್ತರು, ಬೆಂಗಳೂರು ಮಹಾನಗರ ಪಾಲಿಕೆ, ಎನ್.ಆರ್.ಚೌಕ. ಬೆಂಗಳೂರು-560002** ರವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು ಮತ್ತು ಡಿ.ಡಿ. ಗಳನ್ನು State Bank of India, State Bank of Mysore and Canara Bank ಗಳಿಂದ ಮಾತ್ರ ಪಡೆಯತಕ್ಕದ್ದು **ಹಾಗೂ ಡಿ.ಡಿ.ಯ ಹಿಂದೆ ಹೆಸರು ಮತ್ತು ವಿಳಾಸವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.** ಡಿ.ಡಿ.ಗಳನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

    (ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲಿಯೂ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಸಂಸ್ಥೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ನಿಗದಿತ ಶುಲ್ಕಕ್ಕಿಂತ ಕಡಿಮೆ ಮೊತ್ತವನ್ನು ಸಂದಾಯ ಮಾಡಿದ ಅಥವಾ ಶುಲ್ಕವನ್ನು ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು)

16. ಸಹಿ ಮಾಡದಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
17. **ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು**.
18. **ಅಂಚೆ ವಿಳಂಬಕ್ಕೆ ಪಾಲಿಕೆಯು ಜವಾಬ್ದಾರರಾಗುವುದಿಲ್ಲ**.

19. **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳ ಪ್ರತಿಗಳನ್ನು ಅರ್ಜಿ ಸಲ್ಲಿಸುವ ದಿನಾಂಕದಂದು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ ಪಡೆದು ಲಗತ್ತಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

- ಪ.ಜಾ/ಪ.ಪಂ : ನಮೂನೆ – ಡಿ
- ಪ್ರವರ್ಗ–1 : ನಮೂನೆ – ಇ ಹಾಗೂ
- ಪ್ರವರ್ಗ2ಎ, 2ಬಿ, 3ಎ, 3ಬಿ : ನಮೂನೆ – ಎಫ್ ರಲ್ಲಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನದವರೆಗೆ 5 ವರ್ಷಗಳ ಅವಧಿಯಲ್ಲಿರಬೇಕು. **ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ**.

20. **ಯೋಜನೆ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು** :

ಸರ್ಕಾರಿ ಆದೇಶ ಸಂಖ್ಯೆ; ಸಿಆಸುಇ 71 ಸೆನೆನಿ 2001 ದಿನಾಂಕ: 24–10–2002 ರನ್ವಯ ಶೇಕಡ 5 ರಷ್ಟು ಹುದ್ದೆಗಳನ್ನು ಯೋಜನಾ ನಿರಾಶ್ರಿತರ ಗುಂಪಿಗೆ ಮೀಸಲಿಡಲಾಗಿದೆ. ಈ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್‌ರವರು ನೀಡಿದ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. **(ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ)**.

21. **ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು** :

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟದ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು

22. **ಅಂಗವಿಕಲ ಅಭ್ಯರ್ಥಿಗಳು** :

ಅಂಗವಿಕಲ ಅಭ್ಯರ್ಥಿ ಎಂದರೆ,

(ಎ) (ಅ) ಕಣ್ಣಿನ ದೃಷ್ಟಿಯನ್ನು ಸರಿಪಡಿಸುವ ಕನ್ನಡಕವನ್ನು ಹಾಕಿದಾಗ ಎರಡೂ ಕಣ್ಣಿನ ಪೈಕಿ ಉತ್ತಮವಾದ ಕಣ್ಣಿನಲ್ಲಿ 6:60 ಅಥವಾ 20:2000 (ಸ್ನೆಲನ್) ಅನ್ನು ಮೀರದಿರುವ ದೃಷ್ಠಿ ಸಾಮಾರ್ಥ್ಯ ಇರುವ ವ್ಯಕ್ತಿ.

(ಆ) 20 ಡಿಗ್ರಿಗಳು ಅಥವಾ ಅದಕ್ಕೂ ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಠಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ.

(ಇ) ಸಂಪೂರ್ಣವಾಗಿ ದೃಷ್ಠಿ ಸಾಮರ್ಥ್ಯವನ್ನು ಕಳೆದುಕೊಂಡಿದ್ದವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

(ಬಿ) ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು ಕೇಳಿಸುವ ಅಥವಾ ಅರ್ಥವಾಗದ ಅಥವಾ ಎರಡೂ ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್‌ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯ) ಅಥವಾ ಎರಡೂ ಕಿವಿಗಳು ಶ್ರವಣ ಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರೀಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಸಿ) ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

(ಡಿ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.

(ಇ) ದೈಹಿಕ ಅಂಗವಿಕಲತೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಆರ್ಥೋಪೆಡಿಕ್ ಸರ್ಜನ್) ರಿಂದ ದೈಹಿಕ ಅಂಗವಿಕಲತೆಯ ಮೌಲಿಕರಣವನ್ನು ಅಲ್ಮಿಕೊ ಕಾನ್ಪುರ್ (ಡಬ್ಲ್ಯೂ.ಎಚ್.ಒ. ಸ್ಟ್ಯಾಂಡರ್ಡ) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 115 ಸೆನೆನಿ 2005 ದಿ:19–11–2005 ರಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಶೇ.40 ರಿಂದ 75 ಕ್ಕಿಂತ ಹೆಚ್ಚಾಗಿರಬಾರದು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದುಕೊಂಡಿರಬೇಕು.

23. **ಗ್ರಾಮೀಣ ಅಭ್ಯರ್ಥಿಗಳು** :

ಗ್ರಾಮೀಣ ಮೀಸಲಾತಿ ಬಯಸುವ ಅಭ್ಯರ್ಥಿಗಳು 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರಬೇಕು. ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರವನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/96/ಸೆನೆನಿ/2005 ದಿನಾಂಕ; 10–08–2005 ರಲ್ಲಿ ಸೂಚಿಸಿರುವಂತೆ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರದ ಮೇಲೆ, ಆ ಶಾಲಾ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು, ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಕಡ್ಡಾಯವಾಗಿ ಪಡೆದಿರಬೇಕು. ಗ್ರಾಮೀಣ ಮೀಸಲಾತಿಯನ್ನು ಬಯಸುವ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಸಂಬಂಧಪಟ್ಟ ತಹಸೀಲ್ದಾರ್ ರವರಿಂದ ತಾವು ಮೇಲುಸ್ತರದ ವ್ಯಾಪ್ತಿಗೆ ಒಳಪಡುವುದಿಲ್ಲವೆಂದು ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಕಡ್ಡಾಯವಾಗಿ ಪಡೆದಿರಬೇಕು. **(ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ).**

24. **ಕನ್ನಡ ಮಾಧ್ಯಮ ಅಭ್ಯರ್ಥಿಗಳು** :

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 71 ಎಸ್ಆರ್ಆರ್ 2001 ದಿನಾಂಕ: 24–10–2002ರಲ್ಲಿ ಹೊರಡಿಸಿದ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ (9) (1) (ಸಿ) ರ ಅನ್ವಯ ಅಭ್ಯರ್ಥಿಯು 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರದ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. **(ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ).**

25. **ಅರ್ಹತಾ ಷರತ್ತುಗಳು** :

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಪಾಲಿಕೆಯು ಕಾಯ್ದಿರಿಸಿಕೊಂಡಿದೆ ಮತ್ತು ಪಾಲಿಕೆಯ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗತಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಆಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

26. **ಕೆಳಕಂಡ ದಾಖಲೆಗಳನ್ನು ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂದು ಖಚಿತ ಪಡಿಸಿಕೊಳ್ಳುವುದು**

- ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕ ಪಟ್ಟಿ ಹಾಗು ಪ್ರಮಾಣ ಪತ್ರಗಳು
- ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆಯ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉಧೃತ ಭಾಗ.
- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಮೀಸಲಾತಿ ಕೋರಿದ್ದಲ್ಲಿ)
- ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

**ಮೇಲ್ಕಂಡಂತೆ ನಿಗದಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

27. **ಇತರೆ ಸೂಚನೆಗಳು:**

1. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
2. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
3. ಅಭ್ಯರ್ಥಿಗಳ ಪ್ರಮಾಣ ಪತ್ರಗಳ ಪರಿಶೀಲನೆ ಸಮಯದಲ್ಲಿ ಸುಳ್ಳು ಮಾಹಿತಿ ಅಥವಾ ಸುಳ್ಳು ದಾಖಲೆಗಳನ್ನು ನೀಡಿರುವುದು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಯಾಗುವ ಅವಕಾಶವನ್ನು ಕಳೆದುಕೊಳ್ಳುತ್ತಾರೆ. ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾದ ಮಾತ್ರಕ್ಕೆ ಅಭ್ಯರ್ಥಿಗಳು ನೇಮಕಾತಿಗೆ ಹಕ್ಕನ್ನು ಪಡೆದುಕೊಳ್ಳುವುದಿಲ್ಲ
4. ಯಾವುದೇ ಹಂತದಲ್ಲಿ ತಪ್ಪು ಮಾಹಿತಿಯ ಆಧಾರದ ಮೇಲೆ ಆಯ್ಕೆಯಾದ ಅಥವಾ ಅನರ್ಹತೆಯ ಕಾರಣಗಳಿಗಾಗಿ ಅಭ್ಯರ್ಥಿಯ ಹೆಸರನ್ನುಪಟ್ಟಿಯಿಂದ ಕೈಬಿಡುವ ಅಥವಾ ನೇಮಕಾತಿ ಆದೇಶವನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿರುತ್ತದೆ.

ಸಹಿ/-
ಸಿದ್ದಯ್ಯ
ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## (ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಡಿ

(ನಿಯಮ 3ಎ (2) (3) ನೋಡಿ)

### ಅನುಸೂಚಿತ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

## ಪ್ರಮಾಣ ಪತ್ರ

....................................ರಾಜ್ಯದ / ಕೇಂದ್ರಾಡಳಿತ ಪ್ರದೇಶದ *..............................ಜಿಲ್ಲೆಯ /ವಿಭಾಗದ ...........................ಗ್ರಾಮ/ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ...........................ಎಂಬುವವರ ಮಗ /ಮಗಳಾದ ಶ್ರೀ / ಶ್ರೀಮತಿ ................................ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳೂ) ಆದೇಶ 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿ ಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964.
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967.
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ....................................... ಮತ್ತು / ಅಥವಾ ಅವನ * / ಅವಳ* ಕುಟುಂಬವು ....................................................ರಾಜ್ಯ/ಕೇಂದ್ರಾಡಳಿತ.......................................... ಪ್ರದೇಶದ.......................................ಜಿಲ್ಲಾ/ವಿಭಾಗದ....................... ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ(ಗಳು)

ಸಹಿ -----------------------------

ತಹಶೀಲ್ದಾರ್ ----------------------

ಸ್ಥಳ:

ದಿನಾಂಕ: ಪದನಾಮ

ಕಛೇರಿಯ ಮೊಹರಿನೊಂದಿಗೆ

**ರಾಜ್ಯ / ಕೇಂದ್ರಾಡಳಿತ ಪ್ರದೇಶ ***
***ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

**ಸೂಚನೆ**: ಇಲ್ಲಿ ಉಪಯೋಗಿಸಿದ **'ಸಾಮಾನ್ಯ ನಿವಾಸಿಗಳು'** ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರರ್ವ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

(ನಿಯಮ 3ಎ (2) (3) ನೋಡಿ)

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

..................................ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ........................... ನಿವಾಸಿಯಾದ ಶ್ರೀ / ಶ್ರೀಮತಿ ..........................................ಇವರ ಮಗ /ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ................................................ ಇವರು ಹಿಂದುಳಿದ ವರ್ಗಗಳ (ಪ್ರವರ್ಗ ..............................................................ಜಾತಿಯ ........................... ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

**ಸ್ಥಳ**:
**ದಿನಾಂಕ**:

**ತಹಶೀಲ್ದಾರ್**

**ತಾಲ್ಲೂಕು**

**ಕಛೇರಿಯ ಮೊಹರು**

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ)**

..................................ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ...................... ಇವರ ಮಗ/ ಮಗಳು/ ಪತಿ/ ಪತ್ನಿಯಾದ ಶ್ರೀ / ಶ್ರೀಮತಿ/ ಕುಮಾರಿ ..........................ಇವರು ಮತ್ತು ಆತನ / ಅವಳ ತಂದೆ / ತಾಯಿ/ ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲೂಡಿ 225 ಬಿಸಿಎ 2000 ದಿನಾಂಕ: 30–03–2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು:

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು:

**ಅಥವಾ**

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ:

**ಅಥವಾ**

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು:

**ಅಥವಾ**

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎರಡು ಲಕ್ಷ ಮೀರುವುದಿಲ್ಲವೆಂದು:

**ಅಥವಾ**

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯೂನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲೂಡಿ 225 ಬಿಸಿಎ 2000 ದಿನಾಂಕ:30.03.2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ ..........................................ಇವರು ..........................ಜಾತಿಗೆ ಸೇರಿದ...............................ಉಪಜಾತಿಯವರಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲೂಡಿ 225 ಬಿಸಿಎ 2002 ದಿನಾಂಕ:30.03.2000ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ.......................................... (2ಎ, 2ಬಿ, 3ಎ, 3ಬಿ) ಕ್ಕೆ ಸೇರಿರುತ್ತಾರೆ.

**ಸ್ಥಳ:**
**ದಿನಾಂಕ:** **ತಹಶೀಲ್ದಾರ್**

**---------- ತಾಲೂಕು**

## ನಮೂನೆ – 1

### ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ:

**ತಹಶೀಲ್ದಾರರು**

ತಾಲ್ಲೂಕು

ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ........................................................ಎಂಬುವವರ ಮಗ / ಮಗಳು / ಪತಿ / ಪತ್ನಿ ...........................................ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಆಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು

   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ(ತಂದೆ/ತಾಯಿ ಜೀವಂತವಿಲ್ಲದಿದ್ದರೆ)

   ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

## ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

### ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ...................................................... ಎಂಬುವವರ ಮಗ / ಮಗಳು / ಪತಿ / ಪತ್ನಿ, ಶ್ರೀ/ಶ್ರೀಮತಿ/ಕುಮಾರಿ ................................ಎಂಬುವವರು ಕರ್ನಾಟಕ ರಾಜ್ಯದ .............ಜಿಲ್ಲೆಯ ವಿಭಾಗ .............................ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ...................................ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ:31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

**ಸ್ಥಳ:** **ತಹಶೀಲ್ದಾರ್**
**ದಿನಾಂಕ:** **ತಾಲ್ಲೂಕು**
**ಕಛೇರಿಯ ಮೊಹರು**

**ಸೂಚನೆ–1** : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ–2** : ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ:31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

## ನಮೂನೆ – 2
## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ………………………………………………….. ರವರ ಮಗ / ಮಗಳು / ಪತಿ / ಪತ್ನಿ, ಶ್ರೀ/ಶ್ರೀಮತಿ/ಕುಮಾರಿ ……………………ಜಿಲ್ಲೆ…………….. ತಾಲ್ಲೂಕು …………………..ಗ್ರಾಮದಲ್ಲಿ ………………ವಾಸವಾಗಿರುವ ಇವರು ಒಂದನೇ ತರಗತಿಯಿಂದ ……….ತರಗತಿಯವರೆಗೆ ……………..ಜಿಲ್ಲೆ ……………ತಾಲ್ಲೂಕು ………….ಪಟ್ಟಣ ……….ಶಾಲೆಯಲ್ಲಿ ವ್ಯಾಸಂಗ ಮಾಡಿ …………ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು

ಮೇಲು ರುಜು<br>ಕ್ಷೇತ್ರ ಶಿಕ್ಷಣ ಅಧಿಕಾರಿ<br>ಕಛೇರಿಯ ಮೊಹರು

ಸಹಿ<br>ಮುಖ್ಯೋಪಾಧ್ಯಾಯರ ಸಹಿ<br>ಮತ್ತು ಸಂಸ್ಥೆಯ ಮೊಹರು

ಸ್ಥಳ:<br>ದಿನಾಂಕ:

## ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 44 ಸೆನೆನಿ 2001 ದಿನಾಂಕ: 27.07.2001
## ನಮೂನೆ – 3
## ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ

ಶ್ರೀ/ಶ್ರೀಮತಿ ……………………………………………….ಎಂಬುವವರ ಮಗ / ಮಗಳು / ಪತಿ / ಪತ್ನಿ ಶ್ರೀ/ಶ್ರೀಮತಿ/ಕುಮಾರಿ ………………………..ಜಿಲ್ಲೆ ………………...ತಾಲ್ಲೂಕು ……………ಗ್ರಾಮದಲ್ಲಿ …………………ವಾಸವಾಗಿರುವ ಇವರು: ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು …………………ಯೋಜನೆಗಾಗಿ ..................... ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ:–

(ಅ) * * ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು<br>
(ಆ) * * ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ: ಯೋಜನೆಯಿಂದ ತಾವು ವಾಸಿಸುವ ಮನೆ:<br>
(ಇ) * * ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿಭೂಮಿ:<br>
(ಈ) * * ಇತರ ಇನ್ಯಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ:<br>ದಿನಾಂಕ:

ತಹಶೀಲ್ದಾರ್<br>ತಾಲ್ಲೂಕು<br>ಕಛೇರಿಯ ಮೊಹರು

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ………………ರವರ ಮಗ/ಮಗಳು/ಪತಿ/ ಪತ್ನಿ, ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ……………ಜಿಲ್ಲೆ ತಾಲ್ಲೂಕು …………………...ಗ್ರಾಮದಲ್ಲಿ ………………ವಾಸವಾಗಿರುವ ಇವರು…..ನೇ ತರಗತಿಯಿಂದ ……….ನೇ ತರಗತಿಯವರೆಗೆ ……………..ಶೈಕ್ಷಣಿಕ ವರ್ಷದಿಂದ ……………ಶೈಕ್ಷಣಿಕ ವರ್ಷದವರೆಗೆ ………….ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:<br>ದಿನಾಂಕ: ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005

## CERTIFICATE FOR THE PERSONS WITH DISABILITIES

This is to certify that Sri/ Smt/ Kum ………………………… …………………son /wife/daughter of Sri ……………………………………………………………… Age………………………….old, male/ female, Registration No…………………….is a case of …………………………He/She is physically disabled/visual disabled/speech and hearing disabled and has……………………..% (………………..percent) permanent (physical impairment visual impairment speech & hearing impairment) in relation of his/her………………………………………..

**Note:**

1. This condition is progressive/ non-progressive/likely to improved/not likely to improve. *
2. Re-assessment is not recommended/is recommended after a period of ………………………..months/years. *

* Strike out which is not applicable

(Recent Attested
Photograph showing
the disability
affixed here)

| Sd/- | Sd/- | Sd/- |
|---|---|---|
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO/Head
of Hospital (with seal)

Signature / Thumb impression
of the disabled person